## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 800 (910) |
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21-12-2021 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ರಸ್ತೆಗಳು ತೀರಾ ಹಾಳಾಗಿದ್ದು, ರಸ್ತೆಗಳ ಗುಂಡಿಗಳಿಂದ ಅಪಘಾತಗಳಾಗಿ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಹಾಗಿದ್ದಲ್ಲಿ, ಮಹಾನಗರಗಳ ವ್ಯಾಪ್ತಿಯಲ್ಲಿ ರಸ್ತೆಗಳ ಗುಂಡಿ ಮುಚ್ಚಲು ಮತ್ತು ಹಾಳಾದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ರಸ್ತೆಗಳ ಗುಂಡಿ ಮುಚ್ಚಲು ಮತ್ತು ಹಾಳಾದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರದಿಂದ ಪ್ರತ್ಯೇಕವಾಗಿ ಅನುದಾನವನ್ನು ಒದಗಿಸುವುದಿಲ್ಲ. ರಸ್ತೆಗಳ, ಗುಂಡಿ ಮುಚ್ಚಲು ಮತ್ತು ಹಾಳಾದ ರಸ್ತೆಗಳನ್ನು ಸರಿಪಡಿಸಲು ಮಹಾನಗರ ಪಾಲಿಕೆಯು ತನ್ನ ಸ್ವಂತ ಸಂಪನ್ಮೂಲಗಳಿಂದ ಭರಿಸಬೇಕು ಮತ್ತು ಸರ್ಕಾರದ ವಿವಿಧ ಯೋಜನೆಯಡಿ ಯೋಜನೆಯ ಮಾರ್ಗಸೂಚಿಯಂತೆ ಮತ್ತು ಅನುದಾನ ಲಭ್ಯತೆಗನುಗುಣವಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅವಶ್ಯಕವಿರುತ್ತದೆ.<br><br>**1. ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ:**<br><br>ರಾಜ್ಯದ 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲುಒಟ್ಟು ರೂ.1325.00 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಹುಬ್ಬಳ್ಳಿ-ಧಾರವಾಡ, ಮೈಸೂರು, ಕಲಬುರ್ಗಿ ಮಹಾನಗರ ಪಾಲಿಕೆಗಳಿಗೆ ರೂ.150.00 ಕೋಟಿಗಳು ಹಾಗೂ ಮಂಗಳೂರು, ಶಿವಮೊಗ್ಗ, ತುಮಕೂರು, ದಾವಣಗೆರೆ, ವಿಜಯಪುರ, ಬಳ್ಳಾರಿ, ಬೆಳಗಾವಿ ಮಹಾನಗರ ಪಾಲಿಕೆಗಳಿಗೆ ರೂ.125.00 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಯೋಜನೆಯಡಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾರ್ಗ ಸೂಚಿಯನ್ನು ಹೊರಡಿಸಲಾಗಿದೆ. |

| | | |
|---|---|---|
| | | **2. 15ನೇ ಹಣಕಾಸುಆಯೋಗದಅನುದಾನ:**<br><br>1. 2020-21ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ 10 ಮಹಾನಗರ ಪಾಲಿಕೆಗಳಿಗೆ ಬಿ.ಬಿ.ಎಂ.ಪಿ (ಹೊರತುಪಡಿಸಿ) ಹಂಚಿಕೆಯಾದ ಮುಕ್ತ ಅನುದಾನ ರೂ. 15553.50 (ಹಂಚಿಕೆಯಾದ ಒಟ್ಟು ಮೊತ್ತದ ಶೇಕಡಾ 50 ರಷ್ಟು) ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ಹಂಚಿಕೆಯಾದ/ ಬಿಡುಗಡೆಯಾದ ಅನುದಾನ ಗರಿಷ್ಟ ಶೇಕಡಾ 20 ರಷ್ಟು ಮೀರದಂತೆ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾರ್ಗ ಸೂಚಿಯನ್ನು ಹೊರಡಿಸಲಾಗಿದೆ.<br>2. 2021-22ನೇ ಸಾಲಿನ ಅನುದಾನದಡಿ ಹಂಚಿಕೆಯಾದ ಒಟ್ಟು ಮೊತ್ತದ ಶೇಕಡಾ 40ರಷ್ಟು ಅನುದಾನವು ಮುಕ್ತ ಅನುದಾನವಾಗಿದ್ದು, ಸದರಿ ಅನುದಾನದಲ್ಲಿ ಮಹಾನಗರಪಾಲಿಕೆಗಳಿಗೆ ನಗರದ ಅವಶ್ಯಕತೆ ಗನುಗುಣವಾಗಿ ಹಾಗೂ ಅನುದಾನ ಲಭ್ಯತೆಗನುಗುಣವಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾರ್ಗಸೂಚಿ ಹೊರಡಿಸಲಾಗಿದೆ. 2021-22ನೇ ಸಾಲಿಗೆ ರಾಜ್ಯದ 10 ಮಹಾನಗರ ಪಾಲಿಕೆಗಳಿಗೆ ಬಿ.ಬಿ.ಎಂ.ಪಿ (ಹೊರತುಪಡಿಸಿ) ಮುಕ್ತ ಅನುದಾನ ಒಟ್ಟು ರೂ.9249.20 ಲಕ್ಷ ಹಂಚಿಕೆಯಾಗಿದ್ದು, ಮೊದಲನೆಯ ಕಂತಿನ ಅನುದಾನ ರೂ.4624.60 ಲಕ್ಷಗಳನ್ನು ಈವರೆಗೆ ಬಿಡುಗಡೆಗೊಳಿಸಲಾಗಿದೆ.<br><br>**3. ಎಸ್.ಎಫ್‌ಸಿ ವಿಶೇಷ ಅನುದಾನ**<br><br>ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ರಸ್ತೆಗಳ ಗುಂಡಿಯನ್ನು ಮುಚ್ಚಲು ಸರ್ಕಾರದಿಂದ ಮಂಜೂರಾದ ಎಸ್.ಎಫ್‌ಸಿ ವಿಶೇಷ ಅನುದಾನದಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br><br>**3. (A) 2018-19 ನೇ ಸಾಲಿನ ವಿಶೇಷ ಅನುದಾನ**<br><br>2018-19 ನೇ ಸಾಲಿನಲ್ಲಿ ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ 165.00 ಲಕ್ಷಗಳನ್ನು ಕಾಯ್ದಿರಿಸಿದ್ದು 11 ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು 11 ಕಾಮಗಾರಿ ಪೂರ್ಣಗೊಂಡಿದ್ದು ರೂ. 141.32 ಲಕ್ಷಗಳು ವೆಚ್ಚವಾಗಿರುತ್ತದೆ. |

2018–19 ನೇ ಸಾಲಿನಲ್ಲಿ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ 500.00 ಲಕ್ಷಗಳನ್ನು ಕಾಯ್ದಿರಿಸಿದ್ದು 1 ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು 1 ಕಾಮಗಾರಿ ಪೂರ್ಣಗೊಂಡಿದ್ದು ರೂ. 499.50 ಲಕ್ಷಗಳು ವೆಚ್ಚವಾಗಿರುತ್ತದೆ. ವಿವರಗಳನ್ನು **ಅನುಬಂಧ–01**ರಲ್ಲಿ ಲಗತ್ತಿಸಿದೆ.

**3. (B) 2019–20ನೇ ಸಾಲಿನ ವಿಶೇಷ ಅನುದಾನ**

2019–20 ನೇ ಸಾಲಿನಲ್ಲಿ ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 2500.00 ಲಕ್ಷಗಳನ್ನು ಕಾಯ್ದಿರಿಸಿದ್ದು 37 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 9 ಕಾಮಗಾರಿ ಪೂರ್ಣಗೊಂಡಿದ್ದು 28 ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ಅನುದಾನ ಬಿಡುಗಡೆಗೊಂಡಿರುವುದಿಲ್ಲ.

2019–20 ನೇ ಸಾಲಿನಲ್ಲಿ ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 1332.50 ಲಕ್ಷಗಳನ್ನು ಕಾಯ್ದಿರಿಸಿದ್ದು 16 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 16 ಕಾಮಗಾರಿ ಪೂರ್ಣಗೊಂಡಿದ್ದು ರೂ. 1189.29 ಲಕ್ಷಗಳು ವೆಚ್ಚವಾಗಿರುತ್ತದೆ.

2019–20 ನೇ ಸಾಲಿನಲ್ಲಿ ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 459.00 ಲಕ್ಷಗಳನ್ನು ಕಾಯ್ದಿರಿಸಿದ್ದು 21 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 18 ಕಾಮಗಾರಿ ಪೂರ್ಣಗೊಂಡಿದ್ದು 3 ಕಾಮಗಾರಿ ಪ್ರಗತಿಯಲ್ಲಿರುತ್ತದೆ ರೂ. 232.48 ಲಕ್ಷಗಳು ವೆಚ್ಚವಾಗಿರುತ್ತದೆ.

2019–20 ನೇ ಸಾಲಿನಲ್ಲಿ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 1411.63.00 ಲಕ್ಷಗಳನ್ನು ಕಾಯ್ದಿರಿಸಿದ್ದು 239 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 208 ಕಾಮಗಾರಿ ಪೂರ್ಣಗೊಂಡಿದ್ದು 22

| | | |
|---|---|---|
| | | ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಟೆಂಡರ್ ಹಂತದಲ್ಲಿ 9 ಇರುತ್ತದೆ ರೂ. 814.12 ಲಕ್ಷಗಳು ವೆಚ್ಚವಾಗಿರುತ್ತದೆ.<br><br>2019–20 ನೇ ಸಾಲಿನಲ್ಲಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 2872.90 ಲಕ್ಷಗಳನ್ನು ಕಾಯ್ದಿರಿಸಿದ್ದು 101 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 101 ಕಾಮಗಾರಿ ಪೂರ್ಣಗೊಂಡಿದ್ದು ರೂ. 2152.68 ಲಕ್ಷಗಳು ವೆಚ್ಚವಾಗಿರುತ್ತದೆ.<br><br>2019–20 ನೇ ಸಾಲಿನಲ್ಲಿ ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 362.00 ಲಕ್ಷಗಳನ್ನು ಕಾಯ್ದಿರಿಸಿದ್ದು 25 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 18 ಕಾಮಗಾರಿ ಪೂರ್ಣಗೊಂಡಿದ್ದು 7 ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ ರೂ. 270.80 ಲಕ್ಷಗಳು ವೆಚ್ಚವಾಗಿರುತ್ತದೆ.<br><br>2019–20 ನೇ ಸಾಲಿನಲ್ಲಿ ತುಮಕೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 1500.00 ಲಕ್ಷಗಳನ್ನು ಕಾಯ್ದಿರಿಸಿದ್ದು 1 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 1 ಕಾಮಗಾರಿ ಪೂರ್ಣಗೊಂಡಿದ್ದು ರೂ. 1500.00 ಲಕ್ಷಗಳು ವೆಚ್ಚವಾಗಿರುತ್ತದೆ.<br><br>2019–20 ನೇ ಸಾಲಿನಲ್ಲಿ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 400.00 ಲಕ್ಷಗಳನ್ನು ಕಾಯ್ದಿರಿಸಿದ್ದು 1 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 1 ಕಾಮಗಾರಿ ಪ್ರಗತಿಯಲ್ಲಿರುತ್ತದೆ. ರೂ. 363.04 ಲಕ್ಷಗಳು ವೆಚ್ಚವಾಗಿರುತ್ತದೆ. **ಅನುಬಂಧ–02**ರಲ್ಲಿ ಲಗತ್ತಿಸಿದೆ. |
| ಇ) | ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಗುಂಡಿ ಮುಚ್ಚಲು ಮತ್ತು ರಸ್ತೆಗಳ ಅಭಿವೃದ್ಧಿ ಪಡಿಸಲು ಸರ್ಕಾರ ಒದಗಿಸಿದ ಅನುದಾನವೆಷ್ಟು; ಬಳಕೆಯಾದ ಅನುದಾನವೆಷ್ಟು: | ಸರ್ಕಾರದಿಂದ ವಿವಿಧ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ವಿವರ ಈ ಕೆಳಗಿನಂತೆ.<br><br>1) ರೂ. 100.00 ಕೋಟಿ **ನಗರೋತ್ಥಾನ ಹಂತ–3**ರ ಯೋಜನೆಯಡಿ ರಸ್ತೆಗಳ ಅಭಿವೃದ್ಧಿಗಾಗಿ ರೂ.4351.75 ಲಕ್ಷಗಳು ಹಂಚಿಕೆಯಾಗಿದ್ದು, ರೂ 4229.56 ಲಕ್ಷಗಳು ಖರ್ಚಾಗಿರುತ್ತದೆ. ವಿವರಗಳನ್ನು **ಅನುಬಂಧ–03**ರಲ್ಲಿ ಲಗತ್ತಿಸಿದೆ. |

| | | |
|---|---|---|
| | | 2) ರೂ. 100.00 ಕೋಟಿ ವಿಶೇಷ ಅನುದಾನಯೋಜನೆಯಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ರೂ.2210.00 ಲಕ್ಷಗಳು ಹಂಚಿಕೆಯಾಗಿದ್ದು, ರೂ 1105.92 ಲಕ್ಷಗಳು ಖರ್ಚಾಗಿರುತ್ತದೆ. ವಿವರಗಳನ್ನು **ಅನುಬಂಧ-04**ರಲ್ಲಿ ನೀಡಿದೆ.<br><br>3) ಮಹಾತ್ಮಾಗಾಂಧಿ ನಗರ ವಿಕಾಸ ಯೋಜನೆಯಡಿ ರಸ್ತೆಗಳ ಅಭಿವೃದ್ಧಿಗಾಗಿ ರೂ. 7324.99 ಲಕ್ಷಗಳು ಹಂಚಿಕೆಯಾಗಿರುತ್ತದೆ.<br><br>4) ಬೆಳಗಾವಿ ಮಹಾನಗರ ಪಾಲಿಕೆಗೆ 2018-19 ನೇ ಸಾಲಿಗೆ ಎಸ್.ಎಫ್.ಸಿ ವಿಶೇಷ ಅನುದಾನದಡಿ ರೂ. 2500.00 ಲಕ್ಷಗಳು ಮಂಜೂರಾದ ಅನುದಾನದಡಿ 37 ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿದ್ದು 9 ಕಾಮಗಾರಿ ಪೂರ್ಣಗೊಂಡಿದ್ದು 28 ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ಅನುದಾನ ಬಿಡುಗಡೆಗೊಂಡಿರುವುದಿಲ್ಲ.<br><br>5) 2020-21ನೇ ಸಾಲಿನ 15ನೇ ಹಣಕಾಸಿನ ಸಾಮಾನ್ಯ ಮೂಲ ಅನುದಾನದಲ್ಲಿ ರೂ. 220.9 ಲಕ್ಷಗಳ 13 ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ರೂ. 158.29 ಲಕ್ಷಗಳು ವೆಚ್ಚವಾಗಿರುತ್ತದೆ. **ಅನುಬಂಧ-05** ರಲ್ಲಿ ಲಗತ್ತಿಸಿದೆ.<br><br>6) 2021-22ನೇ ಸಾಲಿನ 15ನೇ ಹಣಕಾಸಿನ ಸಾಮಾನ್ಯ ಮೂಲ ಅನುದಾನದಲ್ಲಿ (ಮುಕ್ತ ಅನುದಾನ) ದಲ್ಲಿರೂ. 114.76 ಲಕ್ಷಗಳ 5 ರಸ್ತೆ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾಯೋಜನೆ ಅನುಮೋದನೆಯಾಗಿದ್ದು, ಸದರಿ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿವೆ. **ಅನುಬಂಧ-06**ರಲ್ಲಿ ಲಗತ್ತಿಸಿದೆ. |
| ಈ) | 2021-22 ನೇ ಸಾಲಿಗೆ ಬೆಳಗಾವಿ ಮಹಾನಗರದಲ್ಲಿ ಎಲ್ಲೆಲ್ಲಿ ಯಾವ ರಸ್ತೆಗಳನ್ನು ಎಷ್ಟು ಅನುದಾನದಲ್ಲಿ ಅಭಿವೃದ್ಧಿ ಪಡಿಸಲಾಗಿದೆ.: (ವಿವರ ಒದಗಿಸುವುದು) | 2021-22ನೇ ಸಾಲಿಗೆ ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ವಿವಿಧ ಯೋಜನೆಗಳಡಿ ಕೈಗೊಳ್ಳಲಾದ ರಸ್ತೆಗಳ ವಿವರಗಳು ಈ ಕೆಳಕಂಡಂತಿವೆ;<br><br>1. **ಮಹಾತ್ಮಗಾಂಧಿ ನಗರ ವಿಕಾಸ ಯೋಜನೆಯಡಿ:** ಸದರಿಯೋಜೆಯಡಿ ಒಟ್ಟು ರೂ.3159.93 ಲಕ್ಷಗಳ 24 ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಎಲ್ಲಾ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿವೆ ವಿವರಗಳನ್ನು **ಅನುಬಂಧ**- 07ರಲ್ಲಿ ಲಗತ್ತಿಸಿದೆ. |

| | | |
|---|---|---|
| | | **2. 15ನೇ ಹಣಕಾಸಿನ ಆಯೋಗದ ಅನುದಾನ:**<br>2021-22 ನೇ ಸಾಲಿನ 15ನೇ ಹಣಕಾಸು ಆಯೋಗದ ಮುಕ್ತ ಅನುದಾನದಲ್ಲಿ ರೂ. 114.76 ಲಕ್ಷಗಳ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಎಲ್ಲಾ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿವೆ. ವಿವರಗಳನ್ನು **ಅನುಬಂಧ -06**ರಲ್ಲಿ ಲಗತ್ತಿಸಿದೆ.<br><br>**3. ಎಸ್.ಎಫ್.ಸಿ ಮುಕ್ತನಿಧಿ:**<br>ಬೆಳಗಾವಿ ಮಹಾನಗರ ಪಾಲಿಕೆಗೆ 2021-22 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿಯಡಿ ರಸ್ತೆ ಕಾಮಗಾರಿಗಳಿಗೆ ಅನುದಾನ ಕಾಯ್ದಿರಿಸಿಕೊಂಡಿರುವುದಿಲ್ಲ. |
| ಉ) | ಬೆಳಗಾವಿ ಮಹಾನಗರದಲ್ಲಿ ಹಾಳಾದ ರಸ್ತೆಗಳನ್ನು ಯಾವ ಕಾಲಮಿತಿಯಲ್ಲಿ ಅಭಿವೃದ್ಧಿಪಡಿಸಲಾಗುವುದು? (ವಿವರ ಒದಗಿಸುವುದು) | ಬೆಳಗಾವಿ ಮಹಾನಗರಪಾಲಿಕೆಯಲ್ಲಿ ಹಾಳಾದ ರಸ್ತೆಗಳನ್ನು ಏಕಕಾಲದಲ್ಲಿ ಅಭಿವೃದ್ಧಿಪಡಿಸಲು ಅನುದಾನದ ಕೊರತೆ ಮತ್ತು ನಗರ ಸ್ವಂತ ಸಂಪನ್ಮೂಲದ ಕೊರತೆ ಇರುತ್ತದೆ ಸರ್ಕಾರದಿಂದ ಹಂಚಿಕೆಮಾಡಿ ಬಿಡುಗಡೆಗೊಳಿಸಲಾದ ಅನುದಾನದಿಂದ ಮತ್ತು ಮಹಾನಗರಪಾಲಿಕೆಯ ಸ್ವಂತ ಸಂಪನ್ಮೂಲಗಳಿಂದ ಹಂತ ಹಂತವಾಗಿ ನಗರದ ಅವಶ್ಯಕತೆಗನುಗುಣವಾಗಿ ಅಭಿವೃದ್ಧಿ ಪಡಿಸಲಾಗುವುದು. ಹಾಗೂ ಕೈಗೊಂಡ ಕಾಮಗಾರಿಗಳನ್ನು ಗುತ್ತಿಗೆ ಕಾಲವಧಿಯೊಳಗೆ ಪೂರ್ಣಗೊಳಿಸಲಾಗುವುದು. |

ಕಡತ ಸಂಖ್ಯೆ:ನಅಇ 541 ಎಸ್.ಎಫ್.ಸಿ 2021

[ಬಿ.ಎ. ಬಸವರಾಜ)]
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು